<u>ಪ್ರಧಾನ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಹುಣಸೂರು.</u>

**ಸಿ.ಸಿ. ಸಂಖ್ಯೆ: 620/2014**

**ಸಾಕ್ಷಿಯನ್ನು ದಿಃ 11.06.2024 ರಂದು ಕರೆಸಿ ಪ್ರಮಾಣವಚನ ಬೋದಿಸಲಾಯಿತು.**

| | | | |
|---|---|---|---|
| ಹೆಸರು | ಚಂದ್ರನಾಯಕ | ಸಿ.ಡಬ್ಲ್ಯೂಃ 23 | ಪಿ.ಡಬ್ಲ್ಯೂಃ 28 |
| ತಂದೆಯ ಹೆಸರು | ಪುಟ್ಟನಾಯಕ | | |
| ವಯಸ್ಸು | 37 ವರ್ಷ | | |
| ಕೆಲಸ | ವ್ಯವಸಾಯ | | |
| ವಾಸಸ್ಥಳ | ಮಾದಹಳ್ಳಿಕೊಪ್ಪಲು, ಹುಣಸೂರು | | |

## <u>ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ</u>

1. ನನಗೆ ಚಾಸಾ-1 ರಿಂದ 3, 6 ಹಾಗೂ 22 ರವರ ಪರಿಚಯ ಇಲ್ಲ. ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇದೆ. ದಾಖಲೆ ಅಮಾನತ್ತು ಮಹಜರ್ ಆಗಿದ್ದು ಅದನ್ನು ಈಗಾಗಲೇ ನಿಪಿ.168 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ.168(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಹುಣಸೂರು ಪಟ್ಟಣ ಠಾಣೆಯಲ್ಲಿ ಪೊಲೀಸರು ಸಹಿ ಮಾಡಲು ಹೇಳಿದ್ದಕ್ಕೆ ಸಹಿ ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಬೇರೆ ಯಾರು ಸಹಿ ಮಾಡಿದ್ದಾರೆ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ಮಹಜರ್ ಮಾಡಿಲ್ಲ, ಯಾವುದೇ ವಸ್ತುವನ್ನು ವಶಪಡಿಸಿಕೊಂಡಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಸಅಅ ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಸಾಕ್ಷಿ ತನ್ನ ಸಾಕ್ಷ್ಯವನ್ನು ಅಭಿಯೋಜನೆಗೆ ಪ್ರತಿಕೂಲವಾಗಿ ನುಡಿದಿರುವ ಕಾರಣ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಸಲಾಯಿತು)**

## <u>ಪಾಟೀಸವಾಲುಃ ಮಾನ್ಯ ಸಸಅ ರವರಿಂದಃ</u>

2. ದಿಃ 22.07.2013 ರಂದು ಹುಣಸೂರು ಪಟ್ಟಣ ಠಾಣೆಯಲ್ಲಿ ಚಾಸಾ-6 ರವರು ಪ್ರಸ್ತುತ ಪ್ರಕರಣಕ್ಕೆ ಸಂಬಂಧಪಟ್ಟಂತೆ ಕೋರಿಕಾ ಸಹಿಗಳನ್ನು 6 ಬಿಳಿ ಹಾಳೆಗಳಲ್ಲಿ ಪಡೆಯುವ ಸಮಯದಲ್ಲಿ ನಾನು ಹಾಗೂ ಚಾಸಾ-23 ರವರು

ಹಾಜರಿದ್ದು, ಪೊಲೀಸರು ಸದರಿ ಸಹಿಗಳಿಗೆ R-47 ರಿಂದ R -52 ಎಂದು ಕ್ರಮಾಂಕ ನೀಡಿದ್ದು, ಸದರಿ ಸಹಿಗಳಿಗೆ R-47(ಎ) ರಿಂದ R -52(ಹೆಚ್) ಎಂದು ಗುರುತು ನೀಡಿದ್ದು ಪೊಲೀಸರು ಸದರಿ ಸಹಿಗಳಿಗೆ 6 ಬಿಳಿ ಹಾಳೆಗಳನ್ನು ಒಂದು ಖಾಕಿ ಕವರ್ ನಲ್ಲಿ ಹಾಕಿ ಮಾರ್ಕರ್ ನಿಂದ ಗುರುತಿಸಲಾಗಿದೆ ಎಂದರೆ ಸರಿಯಲ್ಲ. ಮೇಲ್ಕಂಡ ಕೋರಿಕಾ ಸಹಿಗಳನ್ನು **ಎಸ್** ಎಂಬ ಅಕ್ಷರದಿಂದ ಮೊಹರು ಮಾಡಿ ನನ್ನ ಸಹಿ ಇರುವ ಚೀಟಿ ಅಂಟಿಸಿ ಬೆಳಿಗ್ಗೆ 10.00 ರಿಂದ 11.00 ರವರೆಗೆ ಅಮಾನತ್ತು ಕ್ರಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಾನು ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ವಕೀಲರು ಇಲ್ಲವೆಂದಿದ್ದಾರೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸ. ಇದೆ.

(ಜೈಬುನ್ನಿಸಾ)
ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು
ಜೆ. ಎಂ. ಎಫ್. ಸಿ. , ಹುಣಸೂರು.